# ಮೈಸೂರು ವಿಶ್ವವಿದ್ಯಾನಿಲಯ

## ಸಮಾಜಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು

ವಿಶೇಷ ಉಪನ್ಯಾಸ

## "ಮಹಿಳಾ ಸಬಲೀಕರಣದಲ್ಲಿ ಅಂಬೇಡ್ಕರ್‌ರವರ ಪಾತ್ರ ಕುರಿತು ವಿಶೇಷ ಉಪನ್ಯಾಸ"

ಇವರಿಂದ

**ಪ್ರೊ. ಬಿ.ಪಿ. ಮಹೇಶ್‌ಚಂದ್ರ ಗುರು**
ವಿಶ್ರಾಂತ ಪ್ರಾಧ್ಯಾಪಕರು
ಸಮೂಹ ಮಾಧ್ಯಮ ಮತ್ತು ಪತ್ರಿಕೋದ್ಯಮ ಅಧ್ಯಯನ ವಿಭಾಗ
ಮೈಸೂರು ವಿಶ್ವವಿದ್ಯಾನಿಲಯ, ಮಾನಸಗಂಗೋತ್ರಿ, ಮೈಸೂರು

ದಿನಾಂಕ : 24–06–2023

ಸಮಯ : ಬೆಳಿಗ್ಗೆ 10–30ರಿಂದ ಮಧ್ಯಾಹ್ನ 1–30ರ ವರೆಗೆ

ಸ್ಥಳ : ಸಮಾಜಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು.

ಅಧ್ಯಕ್ಷರು, ಉಪನ್ಯಾಸಕರು ಮತ್ತು ಸಿಬ್ಬಂಧಿ ವರ್ಗದವರು
ಸಮಾಜಶಾಸ್ತ್ರ ಅಧ್ಯಯನ ವಿಭಾಗ



ವಿಭಾಗ
ಒಂದಾಗಿ...
ಭಾರತದ
ಪಿತಾಮಹ
ಡಾ.ಬಿ.ಆರ್


ಜಾಗೃತರಾಗಿ...
ಚಿಂತಿಸಿ...
ಒಂದಾಗಿ...
ಸಮಾಜ ಶಾಸ್ತ್ರ ಅಧ್ಯಯನ ವಿಭಾಗ
ಮಾನಸ ಗಂಗೋತ್ರಿ, ಮೈಸೂರು


ಪ್ರಜಾಪ್ರಭುತ್ವದ



ಆಂದೋಲನ

# ‘ಅಂಬೇಡ್ಕರ್ ದೃಷ್ಟಿಕೋನದಂತೆ ಮಹಿಳೆಯರ ಅಭಿವೃದ್ಧಿ’

## ಮೈವಿವಿ ಸಮಾಜಶಾಸ್ತ್ರ ವಿಭಾಗದಲ್ಲಿ ಅಂಬೇಡ್ಕರ್ ಜಯಂತಿ

ಮೈಸೂರು: ಮಹಿಳೆಯರ ಶಿಕ್ಷಣ, ಕೌಶಲಾಭಿವೃದ್ಧಿ, ಉದ್ಯಮಶೀಲತೆ, ನಾಯಕತ್ವ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳು ಡಾ.ಬಿ.ಆರ್.ಅಂಬೇಡ್ಕರ್ ದೃಷ್ಟಿಕೋನವನ್ನು ಆಧರಿಸಿವೆ ಎಂದು ಪ್ರಗತಿಪರ ಚಿಂತಕ ಪ್ರೊ.ಬಿ.ಪಿ.ಮಹೇಶ್ ಚಂದ್ರಗುರು ಹೇಳಿದರು.

ಮಾನಸಗಂಗೋತ್ರಿಯ ಸಮಾಜಶಾಸ್ತ್ರ ಅಧ್ಯಯನ ವಿಭಾಗದ ವತಿಯಿಂದ ಅಂಬೇಡ್ಕರರ 132ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ‘ಮಹಿಳಾ ಸಬಲಿಕರಣಕ್ಕೆ ಅಂಬೇಡ್ಕರ್ ಕೊಡುಗೆ’ ಎಂಬ ವಿಷಯ ವನ್ನು ಕುರಿತು ಮಾತನಾಡಿದ ಅವರು, ಭಾರತೀಯ ಸಂವಿಧಾನದಲ್ಲಿ ಮೂಲಭೂತ ಹಕ್ಕುಗಳು, ರಾಜ್ಯ ನಿರ್ದೇಶಕ ತತ್ವಗಳು, ಸಾಂವಿಧಾನಿಕ ಪರಿಹಾರಗಳು, ಜೀವಿಸುವ ಹಕ್ಕುಗಳು, ಮೀಸಲು ಸೌಲಭ್ಯ ಮೊದಲಾದ ಅಂಶಗಳನ್ನು ಅಳವಡಿಸಿ ಅಂಬೇಡ್ಕರ್ ಮಹಿಳೆಯರ ಸಬಲೀಕರಣಕ್ಕೆ ಭದ್ರಬುನಾದಿ ಹಾಕಿದರು ಎಂದರು.

ಮಹಿಳೆಯರಿಗೆ ನ್ಯಾಯೋಚಿತವಾಗಿ ಬದುಕುವ, ದುಡಿಯುವ ಮತ್ತು ಅಭಿವೃದ್ಧಿ ಹೊಂದುವ ಅವಕಾಶಗಳನ್ನು ಅಂಬೇಡ್ಕರ್ ಸಂವಿಧಾನದಲ್ಲಿ ಕಲ್ಪಿಸಿಕೊಟ್ಟಿದ್ದಾರೆ ಎಂದರು.



ಮೈಸೂರಿನ ಮಾನಸಗಂಗೋತ್ರಿಯ ಸಮಾಜಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಆಯೋಜಿಸಿದ್ದ ಅಂಬೇಡ್ಕರ್ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಗತಿಪರ ಚಿಂತಕ ಪ್ರೊ.ಬಿ.ಪಿ.ಮಹೇಶ್ ಚಂದ್ರ ಗುರು ಮಾತನಾಡಿದರು. ವಿಭಾಗದ ಮುಖ್ಯಸ್ಥೆ ಪ್ರೊ.ಯಶೋಧ ಹಾಜರಿದ್ದರು.

ಸಮಾಜಶಾಸ್ತ್ರ ಅಧ್ಯಯನ ವಿಭಾಗದ ಮುಖ್ಯಸ್ಥೆ ಪ್ರೊ.ಯಶೋಧ ಮಾತನಾಡಿದರು. ವಿಭಾಗದ ಅಧ್ಯಾಪಕರು, ಸಂಶೋಧಕರು ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.

# ಅಂಬೇಡ್ಕರ್ ಆಧುನಿಕ ಭಾರತದ ಶ್ರೇಷ್ಠ ಸ್ತ್ರೀವಾದಿ

## ಪ್ರೊ. ಮಹೇಶ್ ಚಂದ್ರ ಗುರು ಅಭಿಮತ | ಮೈವಿವಿ ಸಮಾಜಶಾಸ್ತ್ರ ಅಧ್ಯಯನ ವಿಭಾಗದಿಂದ ಡಾ. ಅಂಬೇಡ್ಕರರ 132ನೇ ಜನ್ಮ ದಿನಾಚರಣೆ

• **ಕನ್ನಡಪ್ರಭ ವಾರ್ತೆ** ಮೈಸೂರು

ಬಾಬಾಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಅವರು ಬಹುಮುಖ ಪ್ರತಿಭೆಯ ವ್ಯಕ್ತಿತ್ವ ಹೊಂದಿ ಮಹಿಳೆಯರೂ ಸೇರಿದಂತೆ ಅಂಚಿಗೆ ನೂಕಲ್ಪಟ್ಟ ಜನವರ್ಗಗಳ ಸಬಲೀಕರಣಕ್ಕೆ ಐತಿಹಾಸಿಕ ಹೋರಾಟ ನಡೆಸಿದರು. ಡಾ. ಅಂಬೇಡ್ಕರ್ ಆಧುನಿಕ ಭಾರತದ ಶ್ರೇಷ್ಠ ಸ್ತ್ರೀವಾದಿ ಎಂದು ಪ್ರಗತಿಪರ ಚಿಂತಕ ಪ್ರೊ.ಬಿ.ಪಿ. ಮಹೇಶ್ ಚಂದ್ರ ಗುರು ತಿಳಿಸಿದರು.



ಮೈಸೂರು ವಿವಿ ಮಾನಸಗಂಗೋತ್ರಿಯ ಸಮಾಜಶಾಸ್ತ್ರ ಅಧ್ಯಯನ ವಿಭಾಗ ಏರ್ಪಡಿಸಿದ್ದ ಡಾ. ಅಂಬೇಡ್ಕರರ 132ನೇ ಜನ್ಮ ದಿನಾಚರಣೆಯಲ್ಲಿ ಮಹಿಳಾ ಸಬಲೀಕರಣಕ್ಕೆ ಅಂಬೇಡ್ಕರ್ ಕೊಡುಗೆ ಕುರಿತು ವಿಶೇಷ ಉಪನ್ಯಾಸ ನೀಡಿದ ಅವರು, ಡಾ. ಅಂಬೇಡ್ಕರ್ ಬುದ್ಧರ ಅನುಯಾಯಿ ಮತ್ತು ದಮನಿತ ಸಮುದಾಯಗಳ ರೂವಾರಿಯಾಗಿ ಮಹಿಳೆಯರ ಸಬಲೀಕರಣಕ್ಕೆ ರೂಪಿಸಿದ ಹಿಂದೂ ಕೋಡ್ ಬಿಲ್, ಹಿಂದೂ ವಿವಾಹ ಕಾನೂನು, ಹಿಂದೂ ಉತ್ತರಾಧಿಕಾರ ಕಾನೂನು, ಹಿಂದೂ ಅಪ್ರಾಪ್ತತೆ/ಪೋಷಕತ್ವ ಕಾನೂನು, ಹಿಂದೂ ದತ್ತಕ ಮತ್ತು ಜೀವನಾಂಶ ಕಾನೂನು ಮೊದಲಾದವುಗಳ ಪ್ರಸ್ತುತತೆಯನ್ನು ವಿವರಿಸಿದರು.

ಮಹಿಳೆಯರು ಮತ್ತು ಶೂದ್ರರ ಸಬಲೀಕರಣದ ಬಹುದೊಡ್ಡ ಅಡ್ಡಗಲ್ಲಾಗಿರುವ ಮನುವಿನಿಂದ ನಿರಾಕರಿಸಲ್ಪಟ್ಟ ಮಹಿಳೆಯರ ಹಕ್ಕುಬಾಧ್ಯತೆಗಳನ್ನು ಅಂಬೇಡ್ಕರ್ ಸಂವಿಧಾನದ ಮೂಲಕ ಒದಗಿಸಿದರು. ಭಾರತೀಯ ಸಂವಿಧಾನದಲ್ಲಿ ಮೂಲಭೂತ ಹಕ್ಕುಗಳು, ರಾಜ್ಯ ನಿರ್ದೇಶಕ ತತ್ವಗಳು, ಸಾಂವಿಧಾನಿಕ ಪರಿಹಾರಗಳು, ಜೀವಿಸುವ ಹಕ್ಕುಗಳು, ಮೀಸಲು ಸೌಲಭ್ಯ ಮೊದಲಾದ ಅಂಶಗಳನ್ನು ಅಳವಡಿಸಿ ಅಂಬೇಡ್ಕರ್ ಮಹಿಳೆಯರ ಸಬಲೀಕರಣಕ್ಕೆ ಭದ್ರ ಬುನಾದಿ ಹಾಕಿರುವುದಾಗಿ ಅವರು ಹೇಳಿದರು.

ಸ್ವತಂತ್ರ ಭಾರತದಲ್ಲಿ ಅನುಷ್ಠಾನಗೊಳಿಸಲಾದ ಮಹಿಳಾ ಸಬಲೀಕರಣ ನೀತಿಗಳು ಮತ್ತು ಕಾರ್ಯಕ್ರಮಗಳು ಅಂಬೇಡ್ಕರ್‌ರ ದೂರದೃಷ್ಟಿಯನ್ನು ಪ್ರಧಾನವಾಗಿ ಆಧರಿಸಿವೆ. ಎಲ್ಲಾ ಮಹಿಳೆಯರಿಗೂ ನ್ಯಾಯೋಚಿತವಾಗಿ ಬದುಕುವ, ದುಡಿಯುವ ಮತ್ತು ಅಭಿವೃದ್ಧಿ ಹೊಂದುವ ಅವಕಾಶಗಳನ್ನು ಅಂಬೇಡ್ಕರ್ ಸಂವಿಧಾನದಲ್ಲಿ ಕಲ್ಪಿಸಿಕೊಟ್ಟಿದ್ದಾರೆ. ಮಹಿಳೆಯರ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಅಭಿವೃದ್ಧಿ ಮತ್ತು ನಾಯಕತ್ವ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳು ಅಂಬೇಡ್ಕರ್ ದೃಷ್ಟಿಕೋನವನ್ನು ಆಧರಿಸಿವೆ ಎಂದು ಅವರು ತಿಳಿಸಿದರು.

ವಿಭಾಗದ ಮುಖ್ಯಸ್ಥೆ ಪ್ರೊ. ಯಶೋದಾ ಅಧ್ಯಕ್ಷತೆ ವಹಿಸಿದ್ದರು. ಅಧ್ಯಾಪಕರು, ಸಂಶೋಧಕರು ಮತ್ತು ವಿದ್ಯಾರ್ಥಿಗಳು ಇದ್ದರು.